ಮಂಗಳೂರು ವಿಶ್ವವಿದ್ಯಾನಿಲಯ
MANGALORE UNIVERSITY
(Accredited by NAAC)

ಕ್ರಮಾಂಕ/ No.:ಮಂವಿ/ಶೈಕ್ಷಣಿಕ/ಸಿಆರ್ 38/2022-23/ಎ2

ಕುಲಸಚಿವರ ಕಛೇರಿ
ಮಂಗಳಗಂಗೋತ್ರಿ – 574 199
Office of the Registrar
Mangalagangothri – 574 199
ದಿನಾಂಕ/Date:27.12.2022


## ಅಧಿಸೂಚನೆ

## ಮಂಗಳೂರು ವಿಶ್ವವಿದ್ಯಾನಿಲಯದ ನಲ್ವತ್ತೊಂದನೆಯ ವಾರ್ಷಿಕ ಘಟಿಕೋತ್ಸವ

1. ಮಂಗಳೂರು ವಿಶ್ವವಿದ್ಯಾನಿಲಯದ ನಲ್ವತ್ತೊಂದನೆಯ ವಾರ್ಷಿಕ ಘಟಿಕೋತ್ಸವವನ್ನು 2023ನೇ ಫೆಬ್ರವರಿ ತಿಂಗಳಿನಲ್ಲಿ ನಡೆಸಲು ಉದ್ದೇಶಿಸಿದ್ದು ನಿಖರವಾದ ದಿನಾಂಕವನ್ನು ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್, ಸಾಮಾಜಿಕ ಜಾಲತಾಣ ಹಾಗೂ ಮಾಧ್ಯಮಗಳಲ್ಲಿ ಪ್ರಕಟಿಸಿ ತಿಳಿಸಲಾಗುವುದು.
2. ಮಂಗಳೂರು ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ, ಘಟಕ ಮತ್ತು ಸ್ವಾಯತ್ತ ಕಾಲೇಜುಗಳಲ್ಲಿ 2022–23ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಪೂರ್ಣಗೊಳಿಸಿ ದಿನಾಂಕ **15.01.2023**ರೊಳಗೆ ಪದವಿಗಳನ್ನು ಪಡೆಯಲು ಅರ್ಹರಾಗಿರುವ ಅಭ್ಯರ್ಥಿಗಳ ಯಾದಿಯನ್ನು ನಲ್ವತ್ತೊಂದನೆಯ ವಾರ್ಷಿಕ ಘಟಿಕೋತ್ಸವದಲ್ಲಿ ದೃಢೀಕರಿಸಲಾಗುವುದು.

**ಈ ಘಟಿಕೋತ್ಸವ ಸಮಾರಂಭದಲ್ಲಿ ಪದವಿ ಪಡೆಯಲು ಅರ್ಹರಾದ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರ ವಿತರಣೆಯ ಕಾರ್ಯಕ್ರಮಗಳನ್ನು ಈ ಕೆಳಗಿನಂತೆ ವಿಂಗಡಿಸಲಾಗಿದೆ.**

**ಪ್ರಥಮವಾಗಿ**: ಘಟಿಕೋತ್ಸವ ಸಂದರ್ಭ ವೇದಿಕೆಯಲ್ಲಿ ಗಣ್ಯರಿಂದ ಪದವಿ ಸ್ವೀಕರಿಸುವ ವಿದ್ಯಾರ್ಥಿಗಳು:

ಅ) ಡಾಕ್ಟರಲ್ ಡಿಗ್ರಿ ಪಡೆಯಲು ಅರ್ಹರಾದ ಅಭ್ಯರ್ಥಿಗಳು.

ಆ) ರ್‍ಯಾಂಕ್/ಚಿನ್ನದ ಪದಕ/ನಗದು ಬಹುಮಾನ ಪಡೆಯುವ ಸ್ನಾತಕೋತ್ತರ ಮತ್ತು ಪದವಿಮಟ್ಟದ ಅಭ್ಯರ್ಥಿಗಳು.

**ದ್ವಿತೀಯವಾಗಿ:** ಮುಖ್ಯ ಸಭಾ ಕಾರ್ಯಕ್ರಮ ಮುಗಿದ ನಂತರ ಪದವಿ ಪ್ರಮಾಣ ಪತ್ರ ಸ್ವೀಕರಿಸುವ ವಿದ್ಯಾರ್ಥಿಗಳು: ಪದವಿ/ಸ್ನಾತಕೋತ್ತರ ಪದವಿಯಲ್ಲಿ 6 ಮತ್ತು 6ಕ್ಕಿಂತ ಹೆಚ್ಚಿನ ಸರಾಸರಿ ಸಂಚಿತ ವರ್ಗಾಂಶ (CGPA) ಪಡೆದು ಘಟಿಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲು ಹಿಂದಿನ ದಿನ ನೋಂದಣಿ ಮಾಡಿದ ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಭ್ಯರ್ಥಿಗಳು.

3. ಬಿ.ಪಿ.ಎಡ್. ಮತ್ತು ಬಿ.ಎಡ್. ಪದವೀಧರರನ್ನು ಸ್ನಾತಕೋತ್ತರ ವಿದ್ಯಾರ್ಥಿಗಳೆಂದು ಪರಿಗಣಿಸಲಾಗುವುದಿಲ್ಲ. ಈ ವಿಷಯದಲ್ಲಿ ಪದಕ/ ಬಹುಮಾನ ಪಡೆಯಲು ಅರ್ಹರಾದ ಮತ್ತು ಪ್ರಥಮ ದರ್ಜೆಯಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಮಾತ್ರ ಘಟಿಕೋತ್ಸವಕ್ಕೆ ಪ್ರವೇಶ ಪಡೆಯಲು ಅರ್ಹರು.
4. ಅರ್ಹ ಅಭ್ಯರ್ಥಿಗಳು ಪದವಿಯನ್ನು ಘಟಿಕೋತ್ಸವದಲ್ಲಿ 'ಹಾಜರಿ' ಅಥವಾ 'ಗೈರುಹಾಜರಿ'ಯಲ್ಲಿ ಪಡೆದುಕೊಳ್ಳಬಹುದಾಗಿದೆ. ಆದರೆ ದಿನಾಂಕ: **15.01.2023** ರೊಳಗೆ ವಿವಿಧ ಪದವಿಗಳನ್ನು ಪಡೆಯಲು ಅರ್ಹರಾದ ಎಲ್ಲಾ ಪುನರಾವರ್ತಿತ ಅಭ್ಯರ್ಥಿಗಳು 'ಗೈರುಹಾಜರಿ'ಯಲ್ಲೇ ಪದವಿ ಪ್ರಮಾಣ ಪತ್ರಗಳನ್ನು ಪಡೆದುಕೊಳ್ಳತಕ್ಕದ್ದು. **ಘಟಿಕೋತ್ಸವದ ಅಧಿಕೃತ ದಿನಾಂಕವನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್,** ಸಾಮಾಜಿಕ ಜಾಲತಾಣ ಹಾಗೂ ಮಾಧ್ಯಮಗಳಲ್ಲಿ ಪ್ರಕಟಿಸಿ ತಿಳಿಸಲಾಗುವುದು. ಹಾಜರಿಯಲ್ಲಿ ಪದವಿ ಪಡೆಯಲಿಚ್ಛಿಸುವ ಅಭ್ಯರ್ಥಿಗಳು ಘಟಿಕೋತ್ಸವದ ಹಿಂದಿನ ದಿನ ಪೂರ್ವಾಹ್ನ 10.00 ಗಂಟೆಯಿಂದ ಅಪರಾಹ್ನ 2.00 ಗಂಟೆಯೊಳಗೆ ಪರೀಕ್ಷಾಂಗ ಕಚೇರಿಗೆ ಖುದ್ದಾಗಿ ಭೇಟಿ ನೀಡಿ ವಿಭಾಗದ ಘಟಿಕೋತ್ಸವ ವಹಿಯಲ್ಲಿ ಸಹಿ ಮಾಡತಕ್ಕದ್ದು.
5. 'ಗೈರುಹಾಜರಿ'ಯಲ್ಲಿ ಪದವಿ ಪಡೆಯಲಿಚ್ಛಿಸುವ ಅಭ್ಯರ್ಥಿಗಳಿಗೆ ಪದವಿ ಪ್ರಮಾಣ ಪತ್ರಗಳನ್ನು ಸಂಬಂಧಪಟ್ಟ ಕಾಲೇಜು/ಸ್ನಾತಕೋತ್ತರ ವಿಭಾಗಕ್ಕೆ ಕಳುಹಿಸಿ ಕೊಡಲಾಗುವುದು. ಅಂತಹ ವಿದ್ಯಾರ್ಥಿಗಳು ಪದವಿ ಪ್ರಮಾಣ ಪತ್ರಗಳನ್ನು ಕಾಲೇಜು ಪ್ರಾಂಶುಪಾಲರಿಂದ/ವಿಭಾಗದ ಅಧ್ಯಕ್ಷರಿಂದ ಪಡೆದುಕೊಳ್ಳುವುದು.

6. **ಪದವಿ ಪ್ರಮಾಣ ಪತ್ರದ ಶುಲ್ಕ ವಿವರಗಳು ಈ ಕೆಳಗಿನಂತಿದೆ:**

| | ಸಾಮಾನ್ಯ ವರ್ಗದ ಅಭ್ಯರ್ಥಿಗಳು (ರೂ.) | ಪ.ಜಾತಿ/ಪ.ಪಂಗಡದ ಅಭ್ಯರ್ಥಿಗಳು (ರೂ.) |
|---|---|---|
| ಪದವಿ | 880.00 | 500.00 |
| ಸ್ನಾತಕೋತ್ತರ ಪದವಿ | 1,110.00 | 615.00 |
| ಪಿಎಚ್.ಡಿ./ ಎಂ.ಫಿಲ್. | 2,160.00 | 1,140.00 |
| ಡಿ.ಎಸ್ಸಿ./ಡಿ.ಲಿಟ್. | 3,310.00 | 1,715.00 |

7. ಪಿಎಚ್.ಡಿ./ಡಿ.ಎಸ್ಸಿ./ಡಿ.ಲಿಟ್ ಪದವಿಯನ್ನು ಪಡೆಯಲು ಅರ್ಹರಾದ ಅಭ್ಯರ್ಥಿಗಳು ಅರ್ಜಿಯೊಂದಿಗೆ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಲಗತ್ತಿಸಬೇಕು.
8. ಎಲ್ಲಾ ಸಂಯೋಜಿತ, ಘಟಕ ಮತ್ತು ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರುಗಳು ಎಲ್ಲಾ ಅರ್ಹ ಅಭ್ಯರ್ಥಿಗಳಿಂದ ನಿಗದಿತ ಶುಲ್ಕ ಸಂಗ್ರಹಿಸಿ ರಾಷ್ಟ್ರೀಕೃತ ಬ್ಯಾಂಕಿನ ಶಾಖೆಗಳ ಮುಖಾಂತರ ವಿಶ್ವವಿದ್ಯಾನಿಲಯದ ನಿಧಿಗೆ ಜಮೆ ಆಗುವಂತೆ ಡಿ.ಡಿ./ ಚಲನ್ ಮೂಲಕ ಅಥವಾ ವಿಶ್ವವಿದ್ಯಾನಿಲಯದ ಅಂತರ್ಜಾಲದ (www.mangaloreuniversity.ac.in) quick linksನಡಿ online fees collection ಮೂಲಕ ಪಾವತಿಸಿ ವಿದ್ಯಾರ್ಥಿಗಳ ವಿವರಗಳನ್ನು ಕುಲಸಚಿವರು(ಪ) ಕಚೇರಿಗೆ **ದಿನಾಂಕ: 20.01.2023 ರೊಳಗೆ** ಸಲ್ಲಿಸತಕ್ಕದ್ದು. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳ ದೃಢೀಕರಿಸಿದ ಜಾತಿ ಪ್ರಮಾಣ ಪತ್ರವನ್ನು ಪರೀಕ್ಷಾಂಗ ವಿಭಾಗಕ್ಕೆ ಸಲ್ಲಿಸುವ ವಿವರದ ತ:ಖ್ತೆಯೊಂದಿಗೆ ಲಗತ್ತಿಸಬೇಕು.
9. ಕಾಲೇಜು ಪ್ರಾಂಶುಪಾಲರುಗಳು/ಸ್ನಾತಕೋತ್ತರ ವಿಭಾಗದ ಅಧ್ಯಕ್ಷರು ಅರ್ಹ ಅಭ್ಯರ್ಥಿಗಳ ವಿವರವನ್ನು ಪರೀಕ್ಷಾಂಗ ಕುಲಸಚಿವರಿಗೆ (ಪರೀಕ್ಷಾಂಗ ವಿಭಾಗದಿಂದ ನೀಡಲ್ಪಟ್ಟ) ನಿಗದಿತ ನಮೂನೆಯಲ್ಲಿ **ದಿನಾಂಕ: 20.01.2023ರೊಳಗೆ** ತಲುಪುವಂತೆ ಸಲ್ಲಿಸತ್ಕ ದ್ದು.

ಕುಲಸಚಿವರು

ರಿಗೆ,

1. ಅಧ್ಯಕ್ಷರು, ಎಲ್ಲಾ ಸ್ನಾತಕೋತ್ತರ ವಿಭಾಗಗಳು/ಸಂಯೋಜಕರು, ಸಂಬಂಧಪಟ್ಟ ಕೋರ್ಸುಗಳು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ
2. ಪ್ರಾಂಶುಪಾಲರು, ಎಲ್ಲಾ ಸಂಯೋಜಿತ/ಘಟಕ/ಸ್ವಾಯತ್ತ ಕಾಲೇಜುಗಳು ಮಂಗಳೂರು ವಿಶ್ವವಿದ್ಯಾನಿಲಯ

} ವಿದ್ಯಾರ್ಥಿಗಳ ಅವಗಾಹನೆಗೆ ಸೂಚನಾ ಫಲಕದಲ್ಲಿ ಪ್ರಕಟಿಸಬೇಕೆಂಬ ವಿನಂತಿ ಮೇರೆಗೆ

3. ಎಲ್ಲಾ ನಿಕಾಯದ ಡೀನರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
4. ಸಂಪರ್ಕಾಧಿಕಾರಿ, ವಿಶ್ವವಿದ್ಯಾನಿಲಯ ಮಾಹಿತಿ ಕೇಂದ್ರ, ಸರಕಾರಿ ಪ್ರಥಮ ದರ್ಜೆ ಕಾಲೇಜು, ತೆಂಕನಿಡಿಯೂರು
5. ಸಿಂಡಿಕೇಟು ಮತ್ತು ಶೈಕ್ಷಣಿಕ ಮಂಡಳಿಯ ಸದಸ್ಯರುಗಳು
6. ಕುಲಸಚಿವರು (ಪರೀಕ್ಷಾಂಗ)/ಹಣಕಾಸು ಅಧಿಕಾರಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ
7. ಗ್ರಂಥಪಾಲಕರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ
8. ಕಾರ್ಯಕಾರಿ ಅಭಿಯಂತರರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ
9. ಕರ್ನಾಟಕ ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾನಿಲಯಗಳ ಕುಲಸಚಿವರುಗಳಿಗೆ.
10. ಸಹಾಯಕ ನಿರ್ದೇಶಕರು, ಪ್ರಚಾರ ಮತ್ತು ಮಾಹಿತಿ ಇಲಾಖೆ, ಮಂಗಳೂರು – ಎಲ್ಲಾ ವಾರ್ತಾ ಪತ್ರಿಕೆಗಳಲ್ಲಿ ವಾರ್ತಾ ವಿಷಯವಾಗಿ ಪ್ರಕಟಿಸಬೇಕೆಂಬ ವಿನಂತಿ ಮೇರೆಗೆ.
11. ನಿಲಯ ನಿರ್ದೇಶಕರು, ಆಕಾಶವಾಣಿ, ಮಂಗಳೂರು – ಸುದ್ದಿ ರೂಪದಲ್ಲಿ ಬಿತ್ತರಿಸಬೇಕೆಂಬ ಕೋರಿಕೆ ಮೇರೆಗೆ
12. ಉಪಕುಲಸಚಿವರು/ಸಹಾಯಕ ಕುಲಸಚಿವರು, ಮಂಗಳೂರು ವಿಶ್ವವಿದ್ಯಾನಿಲಯ ಮಂಗಳಗಂಗೋತ್ರಿ.